-3-

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 397 |
| ಸದಸ್ಯರ ಹೆಸರು | : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : 17.07.2019. |
| ಉತ್ತರಿಸುವ ಸಚಿವರು | : ಮಾನ್ಯ ಕಂದಾಯ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತವಾಗಿ ಯಾವುದೇ ಭೂ ಪರಿವರ್ತನೆಯಾಗದೆ ಎಷ್ಟು ಬಡಾವಣೆಗಳು/ ನಿವೇಶನಗಳನ್ನು ರಚಿಸಲಾಗಿದೆ; (ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿ ನೀಡುವುದು) | ಬೆಂಗಳೂರು ನಗರ ಜಿಲ್ಲೆಯಲ್ಲಿನ 05 ತಾಲ್ಲೂಕುಗಳ ವ್ಯಾಪ್ತಿಯಲ್ಲಿ ವ್ಯವಸಾಯದ ಜಮೀನುಗಳನ್ನು ವ್ಯವಸಾಯೇತರ ಉದ್ದೇಶಗಳಿಗೆ ಅಂದರೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರನ್ವಯ ಭೂ ಪರಿವರ್ತನೆ ಆದೇಶ ಪಡೆಯದೇ ಅನಧಿಕೃತವಾಗಿ ನಿರ್ಮಿಸಿರುವ ಬಡಾವಣೆಗಳ ವಿವರ ಈ ಕೆಳಗಿನಂತಿದೆ:-<br><br>ಕ್ರ.ಸಂ. / ತಾಲ್ಲೂಕು / ಸಂಖ್ಯೆ / ವಿಸ್ತೀರ್ಣ<br>1. / ಬೆಂಗಳೂರು ಉತ್ತರ / 960 / 1760-07<br>2. / ಬೆಂಗಳೂರು. ದಕ್ಷಿಣ / 588 / 1267-39<br>3. / ಬೆಂಗಳೂರು ಪೂರ್ವ / 233 / 354-00<br>4. / ಯಲಹಂಕ / 432 / 1004-17<br>5. / ಆನೇಕಲ್ / 302 / 411-18<br>ಒಟ್ಟು / **2515** / **4798-01**<br><br>ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿಯನ್ನು ಸಿಡಿ ರೂಪದಲ್ಲಿ ಸಲ್ಲಿಸಿದೆ. |
| ಆ) | ಅನಧಿಕೃತ ಬಡಾವಣೆ ಇದ್ದಲ್ಲಿ, ಕಂದಾಯ ಇಲಾಖೆ ಇಲ್ಲಿಯವರೆಗೂ ಅನಧಿಕೃತ ಬಡಾವಣೆಗಳ ಮೇಲೆ ಭೂ ಪರಿವರ್ತನೆ ಇಲ್ಲದೆ ಇರತಕ್ಕಂತ ಕೃಷಿ ಜಮೀನುಗಳ ಮೇಲೆ ನಿರ್ಮಾಣವಾಗಿರುವ ಹಳೆಯ ಮತ್ತು ಹೊಸ ಬಡಾವಣೆಗಳ ಮೇಲೆ ಕಾನೂನಿನಡಿಯಲ್ಲಿ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ನಅಇ 248 ಬೆಂಆದೇ 2016, ದಿನಾಂಕ:13/07/2016ರಲ್ಲಿ ಬೆಂಗಳೂರು ನಗರ ಮತ್ತು ಅದರ ಸುತ್ತಮುತ್ತ ನಿರ್ಮಾಣವಾಗುತ್ತಿರುವ ಅನಧಿಕೃತ ಬಡಾವಣೆಗಳನ್ನು ತಡೆಯುವ ಸಲುವಾಗಿ ಮಾರ್ಗಸೂಚಿಗಳನ್ನು ರೂಪಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಮುಂದುವರೆದು, ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 96(2)ರಡಿ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಆರ್‌ಡಿ 12 ಎಲ್‌ಜಿಕ್ಯೂ 2019**

(ಆರ್.ವಿ.ದೇಶಪಾಂಡೆ)
ಕಂದಾಯ ಸಚಿವರು